ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE 3/7/2020

# ತಿದ್ದುಪಡಿಯಿಂದ ನೀರಾವರಿ ಭೂಮಿ ಹೊರಗೆ: ಮಾಧುಸ್ವಾಮಿ ಸಮರ್ಥನೆ

3-7-2020

ಪ್ರಜಾವಾಣಿ ವಾರ್ತೆ

ಬೆಂಗಳೂರು: ಅಚ್ಚುಕಟ್ಟು ಪ್ರದೇಶದ ನೀರಾವರಿ ಭೂಮಿಯನ್ನು 'ಕರ್ನಾಟಕ ಭೂಸುಧಾರಣೆ ಕಾಯ್ದೆ ತಿದ್ದುಪಡಿ' ವ್ಯಾಪ್ತಿಯಿಂದ ಹೊರಗಿಡಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಫಲವತ್ತಾದ ಭೂಮಿ ಅನ್ಯರ ಪಾಲಾಗಬಾರದು ಎಂಬ ಕಾರಣಕ್ಕೆ ಈ ತೀರ್ಮಾನ ಕೈಗೊಳ್ಳಲಾಗಿದೆ ಎಂಬುವುದು ಸರ್ಕಾರದ ವಾದ.

ರೈತರು, ಸಚಿವ ಸಂಪುಟದ ಸಹೋದ್ಯೋಗಿಗಳ ಒತ್ತಡದ ಜತೆಗೆ ಭೂಮಿಯನ್ನು ನೀರಾವರಿಗೆ ಒಳಪಡಿಸಲು ಮತ್ತು ಅಚ್ಚುಕಟ್ಟು ಪ್ರದೇಶದಲ್ಲಿ ಹಲವು ವರ್ಷಗಳಿಂದ ಸರ್ಕಾರ ಹೂಡಿದ ಬಂಡವಾಳದ ಫಲ 'ಕಂಡವರ' ಪಾಲಾಗಬಾರದು ಎಂಬ ಆಶಯ ಇದರ ಹಿಂದೆ ಇದೆ ಸರ್ಕಾರದ ಪ್ರತಿಪಾದನೆ.


ಮಾಧುಸ್ವಾಮಿ

ಈ ಬಗ್ಗೆ 'ಪ್ರಜಾವಾಣಿ' ಜತೆ ಮಾತನಾಡಿದ ಕಾನೂನು ಮತ್ತು ಸಣ್ಣ ನೀರಾವರಿ ಸಚಿವ ಜೆ.ಸಿ.ಮಾಧುಸ್ವಾಮಿ, 'ನೀರಾವರಿ ಕ್ಷೇತ್ರದ ಮೇಲೆ ರಾಜ್ಯ ಸರ್ಕಾರ ಹಲವು ದಶಕಗಳಿಂದ ಅಪಾರ ಪ್ರಮಾಣದಲ್ಲಿ ಬಂಡವಾಳ ಹೂಡಿದೆ. ಅಣೆಕಟ್ಟುಗಳನ್ನು ನಿರ್ಮಿಸಿದೆ. ರೈತರಿಗೆ ಸೌಲಭ್ಯಗಳನ್ನು ಕೊಟ್ಟಿದ್ದೇವೆ. ಅಂತಹ ಜಮೀನುಗಳನ್ನು ಹಣವಂತರು ಖರೀದಿ ಮಾಡಿ ಬೇರೆ ಉದ್ದೇಶಗಳಿಗೆ ಬಳಸಿದರೆ ಅದರಿಂದ ರಾಜ್ಯಕ್ಕೆ ಅನ್ಯಾಯ ಆಗುತ್ತದೆ. ನೀರಾವರಿಗಾಗಿ ಹಣ ಹೂಡಿದ ಉದ್ದೇಶವೇ ವಿಫಲವಾಗುತ್ತದೆ. ಆದ್ದರಿಂದ ಕೊಡಬಾರದು ಎಂದು ತೀರ್ಮಾನ ಮಾಡಿದ್ದೇವೆ' ಎಂದರು.

'ಅಚ್ಚುಕಟ್ಟು ಪ್ರದೇಶದಲ್ಲಿ ಬರುವ ನೀರಾವರಿ ಜಮೀನುಗಳನ್ನು ಉದ್ದೇಶಿತ ತಿದ್ದುಪಡಿ ವ್ಯಾಪ್ತಿಯಿಂದ ಹೊರಗಿಡಲು ತೀರ್ಮಾನಿಸಿದ್ದೇವೆ. ಇದನ್ನು ಬಿಟ್ಟು ಬೇರೆ ಉದ್ದೇಶವಿಲ್ಲ. ತಿದ್ದುಪಡಿಗೆ ಎರಡು- ಮೂರು ಮಾರ್ಪಾಡುಗಳನ್ನು ಮಾಡಿ, ಮುಖ್ಯಮಂತ್ರಿಯವರ ಒಪ್ಪಿಗೆ ಪಡೆದು ಸುಗ್ರೀವಾಜ್ಞೆಯನ್ನು ಹೊರಡಿಸಲಾಗುವುದು' ಎಂದರು.

## ರಾಜ್ಯದಲ್ಲಿ ಕೃಷಿ ಭೂಮಿ

- ಬೇಸಾಯಕ್ಕೆ ಯೋಗ್ಯ ಭೂಮಿ: 1,40,598 ಚ.ಕಿ.ಮೀ
- ಬೇಸಾಯವಾಗುತ್ತಿರುವ ಭೂಮಿ: 1,07,000 ಚ.ಕಿ.ಮೀ
- ನೀರಾವರಿ ಪ್ರದೇಶದಲ್ಲಿ ಕೃಷಿ ಸಾಮರ್ಥ್ಯ: 61 ಲಕ್ಷ ಹೆಕ್ಟೇರ್
- ಬೃಹತ್ ಮತ್ತು ಮಧ್ಯಮ ನೀರಾವರಿ ಯೋಜನೆಯಡಿ: 40.66 ಲಕ್ಷ ಹೆಕ್ಟೇರ್
- ಅಚ್ಚುಕಟ್ಟು ಪ್ರದೇಶದಲ್ಲಿ ವ್ಯವಸಾಯ: 29.19 ಲಕ್ಷ ಹೆಕ್ಟೇರ್